PAPER CLIPPINGS
ಇಲಾಖೆ / ವಿಷಯ : DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER:
ದಿನಾಂಕ : DATE: 24/7/2020

### ತಿದ್ದುಪಡಿಗೆ ಸುಗ್ರೀವಾಜ್ಞೆ । ಸಂಪುಟ ಸಭೆ ಒಪ್ಪಿಗೆ । ಕಾರ್ಮಿಕರ ಕೆಲಸದ ಅವಧಿ ಹೆಚ್ಚಳ ತೀರ್ಮಾನ

# ವಿರೋಧದ ನಡುವೆಯೂ ಕಾರ್ಮಿಕ ಕಾಯ್ದೆಗೆ ಅಸ್ತು

ವಿಜಯವಾಣಿ ಸುದ್ದಿಜಾಲ ಬೆಂಗಳೂರು

ಕಾರ್ಮಿಕ ಕಾಯ್ದೆ ತಿದ್ದುಪಡಿ, ಕರ್ನಾಟಕ ಭ್ರಷ್ಟಾಚಾರ ನಿಗ್ರಹ ದಳ(ಎಸಿಬಿ) ತಿದ್ದುಪಡಿ ವಿಧೇಯಕ (ಸಿಬ್ಬಂದಿ ಮತ್ತು ನೇಮಕ), ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯ ವಿಧೇಯಕ ವಾಪಸ್ ಸೇರಿ ಹಲವು ತೀರ್ಮಾನಗಳನ್ನು ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ನೇತೃತ್ವದಲ್ಲಿ ನಡೆದ ಸಚಿವ ಸಂಪುಟ ಸಭೆ ತೆಗೆದುಕೊಂಡಿದೆ.

ಕಾರ್ಮಿಕರ ತೀವ್ರ ವಿರೋಧದ ನಡುವೆಯೂ ಕೈಗಾರಿಕಾ ವಿವಾದಗಳು ಮತ್ತು ಇತರ ಕೆಲ ಕಾನೂನುಗಳ ತಿದ್ದುಪಡಿ ಸುಗ್ರೀವಾಜ್ಞೆಯನ್ನು ಸಂಪುಟ ಸಭೆ ಅಂಗೀಕರಿಸಿದೆ.

**ದಿನಕ್ಕೆ 35-40 ನಿಮಿಷ ಹೆಚ್ಚುವರಿ ಕೆಲಸ:** ಸಭೆ ಬಳಿಕ ಸುದ್ದಿಗೋಷ್ಠಿಯಲ್ಲಿ ಕಾನೂನು ಸಚಿವ ಜೆ.ಸಿ. ಮಾಧುಸ್ವಾಮಿ ಮಾತನಾಡಿ, ಕೈಗಾರಿಕಾ ಕಾಯ್ದೆ 1948 ಸೆಕ್ಷನ್ 64, 65ಕ್ಕೆ ತಿದ್ದುಪಡಿಗೆ ಒಪ್ಪಿಗೆ ನೀಡಲಾಗಿದ್ದು, ಕಾರ್ಮಿಕರ ಹೆಚ್ಚುವರಿ ಕೆಲಸದ ಮಿತಿ ಹೆಚ್ಚಳ ಮಾಡಲಾಗಿದೆ. ಮೂರು ತಿಂಗಳಿಗೆ 75 ಗಂಟೆಯಿಂದ 125 ಗಂಟೆ ಹೆಚ್ಚುವರಿ ಕೆಲಸ ಮಾಡಲು ಅವಕಾಶ ನೀಡಲಾಗಿದೆ. ಅಂದರೆ 3 ತಿಂಗಳಿಗೆ 50 ಗಂಟೆ ಹೆಚ್ಚುವರಿ ಕೆಲಸ ಮಾಡಬೇಕು. ದಿನಕ್ಕೆ ಕನಿಷ್ಠ 35 ರಿಂದ 40 ನಿಮಿಷ ಹೆಚ್ಚಳ ಆಗಲಿದೆ ಎಂದು ವಿವರಿಸಿದರು. ಕೈಗಾರಿಕಾ ವಿವಾದ ಕಾಯ್ದೆಯ ಸೆಕ್ಷನ್ 25(ಕೆ) ಅಡಿ ಕಾರ್ಮಿಕರ ಮಿತಿಯನ್ನು 100 ರಿಂದ 300ಕ್ಕೆ ಹೆಚ್ಚಿಸಲಾಗಿದೆ ಎಂದು ತಿಳಿಸಿದರು.



## ಇಲಾಖೆಗಳ ವಿಲೀನ

**ಪಿಂಚಣಿ, ಸಣ್ಣ ಉಳಿತಾಯ ಹಾಗೂ ಆಸ್ತಿ ಋಣ ಇಲಾಖೆಗಳನ್ನು ಖಜಾನೆ ಇಲಾಖೆ ಜತೆಗೆ ವಿಲೀನಗೊಳಿಸಲು ತೀರ್ಮಾನಿಸಲಾಗಿದ್ದು, ಕ್ರಿಯಾತ್ಮಕ ಸಂಸ್ಥೆ ಮಾಡುವ ಉದ್ದೇಶದಿಂದ ಈ ನಿರ್ಧಾರ ಮಾಡಲಾಗಿದೆ ಎಂದು ಸಚಿವ ಮಾಧುಸ್ವಾಮಿ ಹೇಳಿದರು.**



ಡ್ರಗ್ಸ್ ಮತ್ತು ಲಾಜಿಸ್ಟಿಕ್ ಸೊಸೈಟಿಯನ್ನು ನಿಗಮ ಮಾಡಲು ಸಂಪುಟ ಒಪ್ಪಿಗೆ ನೀಡಿದೆ. ರಾಜ್ಯ ವಿಶ್ವವಿದ್ಯಾಲಯಗಳ ವಿಧೇಯಕ 2017ನ್ನು ವಾಪಸ್ ಪಡೆದಿದ್ದು, ಸಮಗ್ರ ವಿಧೇಯಕ ತರಲು ಸಭೆ ತೀರ್ಮಾನಿಸಿದೆ ಎಂದರು. ಭ್ರಷ್ಟಾಚಾರ ನಿಗ್ರಹ ದಳ(ಎಸಿಬಿ) ಕೇಡರ್ ನೇಮಕಾತಿಗೆ ಒಪ್ಪಿಗೆ ನೀಡಿದ್ದು, ನಿಯೋಜನೆ ಆಧಾರದ ಮೇಲೆ ನೇಮಕ ಮಾಡಲು ನಿಯಮಾವಳಿಗೆ ತಿದ್ದುಪಡಿ ತರಲು ಅನುಮೋದನೆ ನೀಡಲಾಗಿದೆ ಎಂದು ತಿಳಿಸಿದರು.

**ಎಂಎಸ್‌ಎಂಇಗೆ ಪ್ರೋತ್ಸಾಹ:** ಕರೊನಾ ಲಾಕ್‌ಡೌನ್‌ನಿಂದ ಸಂಕಷ್ಟಕ್ಕೀಡಾಗಿರುವ ಸೂಕ್ಷ್ಮ ಮತ್ತು ಸಣ್ಣ ಕೈಗಾರಿಕಾ ವಲಯಕ್ಕೆ ಸಬ್ಸಿಡಿ ರೂಪದಲ್ಲಿ ಶೇ.10 ರಿಂದ ಶೇ.6ಕ್ಕೆ ಬಡ್ಡಿ ದರವನ್ನು ಇಳಿಕೆ ಮಾಡಲು ಸಭೆಯಲ್ಲಿ ತೀರ್ಮಾನ ಮಾಡಲಾಗಿದೆ. ಕೆಎಸ್‌ಎಫ್‌ಸಿಗೆ 150 ಕೋಟಿ ರೂ. ಸಾಲ ಪಡೆಯಲು ಸರ್ಕಾರದಿಂದ ಖಾತ್ರಿ ನೀಡಲು ನಿರ್ಣಯಿಸಲಾಗಿದೆ ಎಂದು ಮಾಧುಸ್ವಾಮಿ ತಿಳಿಸಿದರು.

ಸರಕು ಸಾಗಣೆ ಮತ್ತು ಸೇವಾ ತೆರಿಗೆ ತಿದ್ದುಪಡಿ ವಿಧೇಯಕ, ಕರ್ನಾಟಕ ಕೈಗಾರಿಕಾ ವಿಧೇಯಕಗಳಿಗೆ ಅನುಮೋದನೆ ನೀಡಲಾಗಿದೆ. ಬೀದರ್ ಮೆಡಿಕಲ್ ಕಾಲೇಜ್‌ನಲ್ಲಿ ಮೂಲಸೌಕರ್ಯ ಅಭಿವೃದ್ಧಿಗೆ 29.87 ಕೋಟಿ ರೂ. ಬಿಡುಗಡೆ ಮಾಡಲು ಅನುಮೋದನೆ, ಅಂಕೋಲಾ ಬಳಿ ನೌಕಾದಳದ ಕಾರ್ಯಾಚರಣೆಗೆ ನಿರ್ಮಾಣವಾಗುತ್ತಿರುವ ವಿಮಾನ ನಿಲ್ದಾಣದಲ್ಲಿ ಸಿವಿಲ್ ಸೇವೆಗೆ ಅನುಮತಿ ನೀಡಲಾಗಿದೆ. ಅದಕ್ಕೆ ರಾಜ್ಯದ ಪಾಲಿನ ಪೈಕಿ 10.20 ಕೋಟಿ ರೂ. ಬಿಡುಗಡೆಗೆ ಒಪ್ಪಿಗೆ ನೀಡಲಾಗಿದೆ ಎಂದರು.

## ಪ್ರಮುಖ ತೀರ್ಮಾನಗಳು

- ಚನ್ನಪಟ್ಟಣ ಬಳಿ ರೈಲ್ವೆ ಮೇಲ್ಸೇತುವೆಗೆ ಭೂ ಸ್ವಾಧೀನಕ್ಕೆ 11.84 ಕೋಟಿ ರೂ. ಬಿಡುಗಡೆಗೆ ತೀರ್ಮಾನ. ಈ ಯೋಜನೆಗೆ 2011ರಲ್ಲಿ 3 ಕೋಟಿ ರೂ. ಬಿಡುಗಡೆ ಮಾಡಲಾಗಿದೆ.
- ರಾಜ್ಯದಲ್ಲಿ ಟೆಕ್ನಾಲಜಿ ಮಿಷನ್ ಕೆಳಗೆ 7 ಸಾವಿರ ಸ್ಟಾರ್ಟ್ ಅಪ್ ಕೆಲಸ ಮಾಡುತ್ತಿದ್ದು, ಇವುಗಳನ್ನು ಕರ್ನಾಟಕ ಡಿಜಿಟಲ್ ಎಕಾನಮಿ ಮಿಷನ್ ಸ್ಥಾಪಿಸಿ ಅದರ ಕೆಳಗೆ ತರಲಾಗುತ್ತಿದೆ.
- ಬಿಬಿಎಂಪಿ ವ್ಯಾಪ್ತಿಯಲ್ಲಿ ಖಾಸಗಿ ವೈದ್ಯಕೀಯ ಸಂಸ್ಥೆಗಳ ನೋಂದಣಿ ಮತ್ತು ಕುಂದು ಕೊರತೆ ಪ್ರಾಧಿಕಾರಕ್ಕೆ ಇನ್ನು ಮುಂದೆ ಬಿಬಿಎಂಪಿ ಆಯುಕ್ತರು ಅಧ್ಯಕ್ಷರಾಗಿರುತ್ತಾರೆ. ಈ ಮೊದಲು ಜಿಲ್ಲಾಧಿಕಾರಿ ಅಧ್ಯಕ್ಷರಾಗಿದ್ದರು.
- ರಾಯಚೂರಿನ ಐಐಐಟಿ ಅತಿಥಿ ಗೃಹಕ್ಕೆ 62 ಲಕ್ಷ ರೂ. ಬಿಡುಗಡೆಗೆ ಸಮ್ಮತಿ.